# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
# ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
# ವಾರ್ಡ್ ಸಮಿತಿ ಸಭೆ ದಿನಾಂಕ: 19/02/2022ರ
# ಸಭಾ ನಡವಳಿ

ಸಕಾಅ/ಕೆಂಉವಿ/ವಾರ್ಡ್ ಕಮಿಟಿ-ಸಭೆ -15/2021-22 ದಿನಾಂಕ: 19.02.2022

ದಿನಾಂಕ: 19/02/2022 ರಂದು ಬೆಳಿಗ್ಗೆ 10.30 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

**ಹಾಜರಿದ್ದವರು:**

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ ಮಹದೇವಪುರ ವಲಯ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್-198, ಹೆಮ್ಮಿಗೆಪುರ |
| 3 | ಶ್ರೀ ರವಿಚಂದ್ರಚಾರಿ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.198, ಹೆಮ್ಮಿಗೆಪುರ |
| 4 | ಶ್ರೀಮತಿ ದೀಪ | ಸಹಾಯಕ ಅಬಿಯಂತರರು ಬೆಂಗಳೂರು ಜಲ ಮಂಡಳಿ |

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳನ್ನು ಹಾಗೂ ಸಭೆಯಲ್ಲಿ



Scanned with CamScanner

ಭಾಗವಹಿಸಿದ್ದ ಎಲ್ಲರನ್ನೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

❖ **ಕೋವಿಡ್–19 ಸಾಂಕ್ರಾಮಿಕ ರೋಗದ ಬಗ್ಗೆ:–** ಅಧ್ಯಕ್ಷರು, ಕೋವಿಡ್–19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂದ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್–19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್–19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು ಮತ್ತು ಮಾಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸಲು ಸೂಚಿಸಲಾಯಿತು ಹಾಗೂ ಕೋವಿಡ್–19 ವ್ಯಾಕ್ಸಿನ್ ಲಸಿಕೆಗಳನ್ನು ನೀಡುತ್ತಿರುವ ಸ್ಥಳ ವಿವರಗಳನ್ನು ಸಭೆಗೆ ತಿಳಿಸಲಾಯಿತು ಹಾಗೂ ಇತ್ತಿಗೆ ಕೋವಿಡ್‌ನ ರೂಪಾಂತರಿಯಾದ "ಓಮೈಕ್ರಾನ್" ವೈರಾಣು ಬೆಂಗಳೂರಿನಲ್ಲಿ ಪತ್ತೆಯಾಗಿದ್ದು, ಕೋವಿಡ್–19ರ ಬೂಸ್ಟರ್ ಲಸಿಕೆಯನ್ನು ಎಲ್ಲ ಹಿರಿಯ ನಾಗರೀಕರು ಪಡೆಯುವಂತೆ ಹಾಗೂ ಕೋವಿಡ್ ಸುರಕ್ಷತಾ ನಿಯಮಾವಳಿಯನ್ನು ತಪ್ಪದೇ ಪಾಲಿಸಲು ಸಭೆಯಲ್ಲಿ ಹಾಜರಿದ್ದ ಎಲ್ಲಾ ನಿವಾಸಿಗಳಿಗೆ ಹಾಗೂ ಬಡಾವಣೆಯ ಪ್ರತಿನಿಧಿಗಳಿಗೆ ತಿಳಿಸಲಾಯಿತು ಮತ್ತು ಕೋವಿಡ್ ಲಸಿಗಳ ಇದರ ಸದುಪಯೋಗ ಪಡೆಯಲು ಭಾಗವಹಿಸಿದ್ದ ಎಲ್ಲರಿಗೂ ಕೋರಲಾಯಿತು.

❖ **ಬೆಂಗಳೂರು ಜಲ ಮಂಡಳಿಗೆ ಸಂಬಂಧಿಸಿದ ದೂರಿನ ಬಗ್ಗೆ:–** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಮೈಲಸಂದ್ರ ಬಾಗೇಗೌಡ ಬಡಾವಣೆಯಲ್ಲಿ ಪಿಜಿ ಕಟ್ಟಡದ ಕೊಳಚೆ ನೀರನ್ನು ಚರಂಡಿಯಲ್ಲಿ ಹರಿಯಲು ಬಿಟ್ಟಿರುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಸಭೆಗೆ ಕೋರಲಾಯಿತು. ಈ ಸಂಬಂಧ ಸಭೆಯಲ್ಲಿ ಹಾಜರಿದ್ದ ಜಲಮಂಡಳಿಯ ಅಧಿಕಾರಿಗಳು ಮಾತನಾಡಿ ಸದರಿ ಕಟ್ಟಡದ ಒಳ ಚರಂಡಿ ಸಂಪರ್ಕವನ್ನು ಯು.ಜಿ.ಡಿ ಕೊಳವೆ ಸಾಲಿಗೆ ಸಂಪರ್ಕ ಕಲ್ಪಿಸಲು ಕಟ್ಟಡದ ಮಾಲೀಕರಿಗೆ ನೋಟೀಸ್ ಜಾರಿಮಾಡಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

❖ **ಬೆಂಗಳೂರು ವಿದ್ಯುತ್ ಸರಬರಾಜು ನಿಗಮ:–** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ರಸ್ತೆಗಳಲ್ಲಿ ಬೆಂಗಳೂರು ವಿದ್ಯುತ್ ಸರಬರಾಜು ನಿಗಮದ ವತಿಯಿಂದ 11 ಕೆ.ವಿ ಭೂಗತ ವಿದ್ಯುತ್ ಕೇಬಲ್‌ನ್ನು ಅಳವಡಿಸಲು ಗುಂಡಿಗಳನ್ನು ತೊಡಲಾಗಿದ್ದು, ರಸ್ತೆಯನ್ನು ಸಮತಟ್ಟು ಮಾಡದೇ ವಿದ್ಯುತ್ ಕೇಬಲ್‌ಗಳನ್ನು ಸಂಚಾರಕ್ಕೆ ತೊಂದರೆಯಾಗುವಂತೆ ರಸ್ತೆಯಲ್ಲಿಯೇ ಬಿಟ್ಟು ಸಾರ್ವಜನಿಕ ಹಾಗೂ ವಾಹನಗಳ ಸಂಚಾರಕ್ಕೆ



Scanned with CamScanner

ತೊಂದರೆ ಮಾಡುತ್ತಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಬೆಸ್ಕಾಂ ಅಧಿಕಾರಿಗಳೊಂದಿಗೆ ಮಾತನಾಡಿ ಸದರಿ ಸಮಸ್ಯೆಯನ್ನು ಬಗೆಹರಿಸಲು ಕೋರಲಾಗುವುದೆಂದು ಸಭೆಗೆ ತಿಳಿಸಿದರು.

❖ **ಪೊಲೀಸ್ ಇಲಾಖೆ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಸರಗಳ್ಳತನ ಪ್ರಕರಣಗಳು ಸಂಭವಿಸುತ್ತಿದ್ದು, ಬಡಾವಣೆಯ ನಾಗರೀಕರ ರಕ್ಷಣೆಗಾಗಿ ಪೊಲೀಸ್ ಬೀಟ್ ವ್ಯವಸ್ಥೆಯನ್ನು ನಿಯೋಜಿಸುವಂತೆ ಸಭೆಗೆ ಕೋರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಕೆಂಗೇರಿ ಪೊಲೀಸ್ ಠಾಣೆಯ ಅಧಿಕಾರಿಗಳೊಂದಿಗೆ ಮಾತನಾಡಿ ಸದರಿ ಸಮಸ್ಯೆಯನ್ನು ಬಗೆಹರಿಸಲು ಆರಕ್ಷಕ ವೃತ್ತ ನಿರೀಕ್ಷಕರಿಗೆ ಕೋರಲಾಗುವುದು ಎಂದು ಸಭೆಗೆ ತಿಳಿಸಿದರು.

❖ **ವಿದ್ಯುತ್ ಬೀದಿ ದೀಪಗಳ ನಿರ್ವಹಣೆ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಪುಷ್ಪ ಸದನ ರಸ್ತೆಯಲ್ಲಿ ಹೊಸದಾಗಿ ವಿದ್ಯುತ್ ಬಿದಿ ದೀಪವನ್ನು ಅಳವಡಿಸಲು ಸಭೆಗೆ ಕೋರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಮಾತನಾಡಿ ಸದರಿ ಸಮಸ್ಯೆಯನ್ನು ಬಗೆಹರಿಸಲಾಗುವುದೆಂದು ಸಭೆಗೆ ತಿಳಿಸಿದರು.

❖ **ಪಶುಪಾಲನಾಧಿಕಾರಿರವರ ಇಲಾಖೆ, ರಾರಾನಗರ ವಲಯ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಿ.ಹೆಚ್.ಇ.ಎಲ್ ಬಡಾವಣೆಗಳಲ್ಲಿ ಬೀದಿ ನಾಯಿಗಳ ಸಂಖ್ಯೆ ಹೆಚ್ಚಿದ್ದು, ಇವುಗಳ ಹಾವಳಿಯಿಂದ ಪಾದಾಚಾರಿಗಳಿಗೆ ಹಾಗೂ ಚಿಕ್ಕಮಕ್ಕಳಿಗೆ ತೊಂದರೆ ಉಂಟಾಗುತ್ತಿರುವ ಬಗ್ಗೆ ಸಭೆಯಲ್ಲಿ ನಾಗರೀಕರು ತಿಳಿಸಿದರು. ಈ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡಿ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಮಾತನಾಡಿ ಸದರಿ ಸಮಸ್ಯೆಯನ್ನು ಬಗೆಹರಿಸಲಾಗುವುದೆಂದು ಸಭೆಗೆ ತಿಳಿಸಿದರು.

❖ **ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ** :- 1) ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಹತ್ತು ಹಳ್ಳಿಗಳಿದ್ದು, ಈ ಹಳ್ಳಿಗಳಿಗೆ ಕುಡಿಯುವ ನೀರನ ವ್ಯವಸ್ಥೆಯನ್ನು ಪಾಲಿಕೆಯ ವತಿಯಿಂದ ಕೈಗೊಳ್ಳಲಾಗುತ್ತಿದ್ದು, ಕಳೆದ ಒಂದು ವರ್ಷದಿಂದ ಸಮರ್ಪಕವಾಗಿ ನಿರ್ವಹಣೆ ಮಾಡುತ್ತಿರುವುದಿಲ್ಲವೆಂದು ಮತ್ತು ಇದರಿಂದ ಕುಡಿಯುವ ನೀರಿಗೆ ತುಂಬಾ ತೊಂದರೆಯಾಗಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ವಾರ್ಡ್‌ನ 110 ಹಳ್ಳಿಗಳ ವ್ಯಾಪ್ತಿಯಲ್ಲಿ ಸುಮಾರು 100ಕ್ಕೂ ಅಧಿಕ ಕೊಳವೆಬಾವಿಗಳಿದ್ದು ಕುಡಿಯುವ ನೀರಿಗೆ ಮೂಲವಾಗಿರುತ್ತದೆ. ದಿನಂಪ್ರತಿ ಸರಾಸರಿ 2 ರಿಂದ 3 ಬೋರ್‌ವೆಲ್‌ಗಳು ಕೆಡುತ್ತಿದ್ದು, ದುರಸ್ಥಿಗಾಗಿ ಅನುದಾನವನ್ನು ಕೋರಿ ಪಾಲಿಕೆಯ ಕೇಂದ್ರ ಕಛೇರಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.



Scanned with CamScanner

2)ದಿನಾಂಕ: 19/02/2022ರಂದು ನಡೆದ ವಾರ್ಡ್ ಕಮಿಟಿ ಸಭೆಯಲ್ಲಿ ಹಲವಾರು ಇಲಾಖೆಗಳ ಅಧಿಕಾರಿಗಳಾದ ಬೆಸ್ಕಾಂ, ಬೃಹತ್ ನೀರುಗಾಲುವೆ, ರಸ್ತೆ ಮೂಲಭೂತ ಸೌಕರ್ಯ, ಬೀದಿ ದೀಪ ವಿಭಾಗ, ಪಶುಸಂಗೋಪನೆ, ರಾರಾನವ, ಪೊಲೀಸ್ ಇಲಾಖೆ ರವರು ಸಭೆಗೆ ಗೈರು ಹಾಜರಾಗಿರುವುದನ್ನು ಸಭೆಯಲ್ಲಿ ಹಾಜರಿದ್ದ ವಾರ್ಡ್‌ನ ನಾಗರೀಕರು ನೋಡಲ್ ಅಧಿಕಾರಿಗಳೊಂದಿಗೆ ಪ್ರಸ್ತಾಪಿಸಿದರು. ಈ ರೀತಿ ಸಭೆಗೆ ಗೈರುಹಾಜರಾದಲ್ಲಿ ವಾರ್ಡ್‌ನಲ್ಲಿರು ಸಮಸ್ಯೆಗಳ ಬಗ್ಗೆ ಚರ್ಚಿಸಲು ಹಾಗೂ ಅದಕ್ಕೆ ಸೂಕ್ತ ಪರಿಹಾರಗಳನ್ನು ಕಂಡುಕೊಳ್ಳಲು ಸಾಧ್ಯವಾಗುತ್ತಿರುವುದಿಲ್ಲವೆಂದು ಮತ್ತು ಈ ಬಗ್ಗೆ ಗೈರುಹಾಜರಾದ ಇಲಾಖೆಯ ಅಧಿಕಾರಿಗಳಿಗೆ ನೋಟೀಸ್ ಜಾರಿ ಮಾಡಲು ಸಭೆಗೆ ಸೂಚಿಸಿದರು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ತಿಂಗಳ ಮೊದಲನೇ ಹಾಗೂ ಮೂರನೇ ಶನಿವಾರದಂದು ಎಲ್ಲಾ ವಾರ್ಡ್‌ಗಳಲ್ಲಿ ವಾರ್ಡ್ ಸಮಿತಿ ಸಭೆಯನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಇದರಿಂದಾಗಿ ಅಧಿಕಾರಿಗಳು ಸಭೆಗೆ ಹಾಜರಾಗಲು ಸಾಧ್ಯವಾಗುತ್ತಿಲ್ಲವೆಂದು ಸಭೆಗೆ ತಿಳಿಸಿದರು ಮತ್ತು ಉದ್ದೇಶಪೂರ್ವಕವಾಗಿ ಗೈರುಹಾಜರಾಗುವ ಅಧಿಕಾರಿಗಳಿಗೆ ನೋಟೀಸ್ ಜಾರಿ ಮಾಡಲಾಗುವುದೆಂದು ಸಭೆಗೆ ತಿಳಿಸಿದರು.

(ದಯಾನಂದ.ಎನ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್-198, ಹೆಮ್ಮಿಗೆಪುರ

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್-198, ಹೆಮ್ಮಿಗೆಪುರ

**ಪ್ರತಿಯನ್ನು:-**

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಕಳುಹಿಸಿದೆ.
8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.



Scanned with CamScanner

11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

12) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

13) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

15) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

16) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

Scanned with CamScanner